**CC 54/2017**
**PW.7**

# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ದೊಡ್ಡಬಳ್ಳಾಪುರ

## ಸಿ ಸಿ ನಂ : 54/2017

**ಪಿ ಡಬ್ಲ್ಯೂ - 07**

**ಸಿ ಡಬ್ಲ್ಯೂ- 10**

**ದಿಃ 17.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ರಾಘವೇಂದ್ರ ಇಂಬ್ರಾಪುರ**
**ತಂದೆಯ ಹೆಸರು ಃ ಜಗನ್ನಾಥ ಇಂಬ್ರಾಪುರ**
**ವಯಸ್ಸು ಃ 43 ವರ್ಷ**
**ಉದ್ಯೋಗ ಃ ಪಿ.ಐ ವಿಕಾಸ ಸೌಧ**
**ವಿಳಾಸ ಃ ಬೆಂಗಳೂರು**

**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದಃ**

ನಾನು ಜೂನ್ 2016 ರಿಂದ ಜನವರಿ 2018 ರವರೆಗೂ ನಾನು ದೊಡ್ಡಬೆಳವಂಗಲ ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ21.07.2016 ರಂದು ಈ ಪ್ರಕರಣದ ಕಡತವನ್ನು ಚಾಸಾ-9 ರವರಿಂದ ಪಡೆದುಕೊಂಡು ಪರಿಶೀಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ. ದಿಃ 13.08.2016 ರಂದು ಆರೋಪಿತರು ಠಾಣೆಗೆ ಹಾಜರಾದ್ದು, ದಸ್ತಗಿರಿ ಕ್ರಮ ಜರುಗಿಸಿ ಸೂಕ್ತ ಜಾಮೀನನ ಮೆರೆಗೆ ಬಿಡುಗಡೆ ಮಾಡಿರುತ್ತೇನೆ. ದಿಃ17.08.2016 ರಂದು ಚಾಸಾ-7 ರವರ ಹೇಳಿಕೆಯನ್ನು ದಾಖಲಿಸಿಕೊಂಡೆನು. ನಂತರ ಅದೇ ದಿನ ಕೃತ್ಯ ನಡೆದ ಸ್ಥಳದ ಜಮೀನಿನ ದಾಖಲೆಗಳನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡೆನು. ಸಾಕ್ಷಿಯು ಜಮೀನಿಗೆ ಸಂಬಂಧಿಸಿದ ಪಹಣಿ, ಮ್ಯುಟೇಷನ್ ವಹಿ ಹಾಗೂ ನಕ್ಷೆಗಳಲ್ಲಿನ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-3 ರಿಂದ 7 ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-3(ಎ) ರಿಂದ 7(ಎ) ಎಂದು ಗುರುತಿಸಲಾಯಿತು. ದಿಃ 26.06.2014 ರ ಅಧಿಕೃತ ಜ್ಞಾಪನೆಯನ್ನು ನಿಪಿ-8 ಎಂದು ಗುರುತಿಸಲಾಯಿತು. ಆರೋಪಿತರ ವಿರುದ್ಧ ಸಾಕ್ಷ್ಯಾಧಾರಗಳು

ಕಂಡ ಬಂದ ಕಾರಣ ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. **(ಈ ದಿನ ಆರೋಪಿತರು ಗೈರು ಹಾಜರಿದ್ದು, ಆರೋಪಿತರ ಪರ ವಕೀಲರು ಆರೋಪಿತರ ಗುರುತಿಸುವಿಕೆಯನ್ನು ಅಲ್ಲಗಳೆದಿರುವುದಿಲ್ಲ).**

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಎ.ಎನ್.ಸಿ., ವಕೀಲರಿಂದಃ**

ಇದೇ ಜಮೀನಿಗೆ ಸಂಬಂಧಿಸಿದಂತೆ ಇದೇ ದೂರುದಾರರು ಇದೇ ಆರೋಪಿತರ ವಿರುದ್ಧ ಈ ಪ್ರಕರಣ ದಾಖಲಾಗುವ ಪೂರ್ವದಲ್ಲಿ ದೂರನ್ನು ದಾಖಲಿಸಿದ್ದರು ಎಂದರೆ ನೆನಪಿಲ್ಲ. ಸದರಿ ಪ್ರಕರಣವು ಸಿಸಿ 1425/2016 ಎಂದು ದಾಖಲಾಗಿರುತ್ತದೆ ಎಂದರೆ ನೆನಪಿಲ್ಲ. ಆರೋಪಿತರು ಆಪಾದಿಸಿರುವಂತೆ ಜಮೀನನ್ನು ಅತಿಕ್ರಮ ಮಾಡಿರುವುದಕ್ಕೆ ಸಂಬಂಧಿಸಿದಂತೆ ಸರ್ವೇಯರ್ ಯಿಂದ ದಾಖಲೆಗಳನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ-7 ರವರಿಂದ ದಾಖಲೆಗಳನ್ನು ಪಡೆದುಕೊಂಡು ಅವರ ಹೇಳಿಕೆಯನ್ನು ದಾಖಲಿಸಿರುತ್ತೇನೆ. ಚಾಸಾ-7 ರವರು ತಮ್ಮ ಹೇಳಿಕೆಯಲ್ಲಿ ಎಲ್ಲಿಯೂ ಆರೋಪಿತರು ಆಪಾದಿಸಿರುವಂತೆ ಅತಿಕ್ರಮ ಪ್ರವೇಶವನ್ನು ಮಾಡಿರುತ್ತಾರೆ ಎಂಬ ಬಗ್ಗೆ ಹೇಳಿಕೆಯನ್ನು ಕೊಟ್ಟಿಲ್ಲ ಎಂದರೆ ಸರಿ. ಅದೇ ರೀತಿ ನಿಪಿ-3 ರಿಂದ 8 ದಾಖಲೆಗಳು ಆರೋಪಿತರು ಆಪಾದಿಸಿರುವಂತೆ ಜಮೀನನ್ನು ಅತಿಕ್ರಮ ಮಾಡಿರುತ್ತಾರೆ ಎಂಬುದನ್ನು ರುಜುವಾತುಪಡಿಸುವುದಿಲ್ಲ ಎಂದರೆ ಸರಿಯಲ್ಲ. ಆರೋಪಿತರ ವಿರುದ್ಧ ಆರೋಪಿಸಿರುವಂತೆ ಜಮೀನು ಅತಿಕ್ರಮ ಮಾಡಿರುವ ಬಗ್ಗೆ ಯಾವುದೇ ದಾಖಲೆಗಳು ಇಲ್ಲದೇ ಇದ್ದರೂ ಸುಳ್ಳು ಪ್ರಕರಣವನ್ನು ದಾಖಲಿಸಲಾಗಿದೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನ ರೀತ್ಯಾ ಬೆರಳಚ್ಚುಗಾರರಿಂದ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲಾಯಿತು ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**